# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರಾಮಚಂದ್ರ, ಜೆ, ಅಧ್ಯಕ್ಷರು, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ/4/ಗ್ರಾಅಪ-110/ಗ್ರಾಪಂ/2017-18, ದಿನಾಂಕ:16-02-2018.
2. ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ:14-03-2018.
3. ಶ್ರೀ ರಾಮಚಂದ್ರ.ಜೆ, ಅಧ್ಯಕ್ಷರು, ಇವರ ಲಿಖಿತ ಹೇಳಿಕೆ ದಿನಾಂಕ:05-04-2018 ಮತ್ತು 30-05-2018.
4. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:04-05-2018 ಮತ್ತು 03-12-2018.

ಪ್ರಸ್ತಾವನೆ:-

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಪ್ರಸ್ತಾವನೆಯಲ್ಲಿ ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀ ರಾಮಚಂದ್ರ. ಜೆ ರವರು ಗ್ರಾಮ ಪಂಚಾಯತಿಯಲ್ಲಿ ಅಧಿಕಾರ ದುರ್ಬಳಕೆ ಮಾಡಿಕೊಂಡು ಅವರ ತಂದೆಯ ಹೆಸರಿನಲ್ಲಿ ಗ್ರಾಮ ಪಂಚಾಯತಿಯ ಹಣ ಸೆಳೆದಿರುತ್ತಾರೆಂದು ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ ಸದಸ್ಯರು ದೂರು ಸಲ್ಲಿಸಿದ ಮೇರೆಗೆ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆಯವರು ಗ್ರಾಮ ಪಂಚಾಯತಿಗೆ ಭೇಟಿ ನೀಡಿ ತನಿಖೆ ಮಾಡಿ ವರದಿ ಸಲ್ಲಿಸಿದ್ದು, ವರದಿಯನ್ನು ಪರಿಶೀಲಿಸಲಾಗಿ ಎರಡು ಅಂಶಗಳಲ್ಲಿ ಅಧ್ಯಕ್ಷರಾದ ಶ್ರೀ ರಾಮಚಂದ್ರ ಜೆ ಇವರು ಕಾನೂನು ಉಲ್ಲಂಘಿಸಿರುವುದು ಕಂಡುಬರುತ್ತದೆ. ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಅಟೆಂಡರ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಜಯರಾಂ ರವರು ಅಧ್ಯಕ್ಷರಾದ ಶ್ರೀ ರಾಮಚಂದ್ರ. ಜೆ ರವರ ತಂದೆಯಾಗಿದ್ದು, ಪೈಪ್‌ಲೈನ್ ದುರಸ್ತಿ, ಟ್ರಾಕ್ಟರ್‌ಗಳಲ್ಲಿ ಮಣ್ಣು ಹೊಡೆಸಿದ ಬಾಬ್ತು ಬೋರ್‌ವೆಲ್ ದುರಸ್ಥಿ ಬಾಬ್ತು ಸದರಿಯವರ ಹೆಸರಿಗೆ ಚೆಕ್ ನೀಡಿರುತ್ತಾರೆಂದು ತಿಳಿಸಿರುತ್ತಾರೆ. ಅಧ್ಯಕ್ಷರು ಪಂಚಾಯಿತಿ ಅಭಿವೃದ್ದಿ ಅಧಿಕಾರಿಯವರ ಗಮನಕ್ಕೆ ತಾರದೆ ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕ ಮಾರಾಟ ಮಾಡುವ ಅಂಗಡಿಗೆ ಖುದ್ದು ವ್ಯಾಪಾರೋದ್ಯಮ ಪರವಾನಿಗೆಗೆ ಸಹಿ ಮಾಡಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(1)ನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದು ಸಾಬೀತಾಗಿರುತ್ತದೆಂದು ಶ್ರೀ ರಾಮಚಂದ್ರ, ಜೆ ಅಧ್ಯಕ್ಷರು, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ ರವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993ರ ಪ್ರಕರಣ 43(1)(v)(ಸಿ) ರಂತೆ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ ರವರು ಮೇಲೆ ಓದಲಾದ (1)ರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ಮತ್ತು 48(4) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕುವ ಬಗ್ಗೆ ಶ್ರೀ ರಾಮಚಂದ್ರ.ಜೆ, ಅಧ್ಯಕ್ಷರು ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸ್‌ಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಲಿಖಿತ ಹೇಳಿಕೆಯನ್ನು ಈ ಕೆಳಕಂಡಂತೆ ಸಲ್ಲಿಸಿರುತ್ತಾರೆ.

"ಗ್ರಾಮ ಪಂಚಾಯತಿಯ ಕೆಲಸಗಳಿಗೆ ಬಿಲ್ ಪಾವತಿಗೆ ಸಂಬಂಧಿಸಿದಂತೆ ವರ್ಗ-1ರ ಲೆಕ್ಕ ಶೀರ್ಷಿಕೆಯಡಿ ಡಿ.ಸಿ.ಬಿ. ನಂ.43/2016-17ರಂತೆ ಪಾವತಿಸಿರುವ ರೂ.22,322/- ಒಟ್ಟು ಮೊತ್ತವನ್ನು ಪೈಪ್ ಲೈನ್ ದುರಸ್ಥಿ ಟ್ರಾಕ್ಟರ್‌ನಲ್ಲಿ ಮಣ್ಣು ಹೊಡೆಸಿದ ಬಾಬ್ತು ಹಾಗೂ ಬೋರ್‌ವೆಲ್ ದುರಸ್ಥಿಯ ಕೂಲಿಯಾಗಿರುತ್ತದೆ. ಕೂಲಿ ಕಾರ್ಮಿಕರಿಗೆ ಕೆಲಸದ ದಿನದಂದೇ ಕೂಲಿಯನ್ನು ಹಾಗೂ ಊಟದ ವ್ಯವಸ್ಥೆ ಮಾಡಬೇಕಾದ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಖಾಯಂ ನೌಕರರಾದ ಶ್ರೀ ಜಯರಾಮ್ ರವರ ಹೆಸರಿಗೆ ಚೆಕ್ ನೀಡಿ ಕೂಲಿ ಕಾರ್ಮಿಕರಿಗೆ ಕೂಲಿ ಪಾವತಿಸಲಾಗಿರುತ್ತದೆ. ನಾನು ಚೆಕ್ ನೀಡಿದಾಗ ಅಧ್ಯಕ್ಷನಾಗಿ ಕೇವಲ ಮೂರು ತಿಂಗಳು ಮಾತ್ರ ಆಗಿದ್ದು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಸಿದ್ಧಪಡಿಸಿದ ಓಚರ್ ಮತ್ತು ಲೆಕ್ಕ ಪುಸ್ತಕಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರವರು ಪರಿಶೀಲಿಸಿ ಸಹಿ ಮಾಡಿದ ಚೆಕ್ಕಿಗೆ ನಾನು ಕೂಡ ಸಹಿ ಮಾಡಿರುತ್ತೇನೆ. ನನ್ನ ತಂದೆ ಎಂಬ ಕಾರಣಕ್ಕೆ ಚೆಕ್ ನೀಡಿರುವುದಿಲ್ಲ. ಈ ರೀತಿಯ ಲೋಪಗಳು ಮುಂದೆ ಆಗದಂತೆ ಎಚ್ಚರವಹಿಸುತ್ತೇನೆ.

ದಿನಾಂಕ:11-08-2016 ರಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮಳಲಿ ಚನ್ನೇನಹಳ್ಳಿ ರವರು ರಸಗೊಬ್ಬರ ಮತ್ತು ಕೀಟನಾಶಕ ವ್ಯಾಪಾರ ಪರವಾನಿಗೆ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿದ್ದು, ಇದರ ಬಗ್ಗೆ ಗ್ರಾಮ ಪಂಚಾಯಿತಿಯವರು ಯಾವುದೇ ಕ್ರಮ ಕೈಗೊಳ್ಳದ ಕಾರಣ ಈ ಬಗ್ಗೆ ದಿನಾಂಕ:29-11-2016ರಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿರವರಿಗೆ ಅರ್ಜಿ ಸಲ್ಲಿಸಿರುತ್ತಾರೆ. ಸದರಿಯವರ ಅರ್ಜಿಯ ವಿಚಾರವಾಗಿ ದಿನಾಂಕ:10-3-2017ರ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ಅನುಮೋದಿಸಿ ದಿನಾಂಕ:11-03-2017 ರಂದು ಪರವಾನಿಗೆಯನ್ನು ನಿಡುವಂತೆ ಸುಚಿಸಿದ್ದರೂ ಸಹ ಕಾರ್ಯದರ್ಶಿ ಹಾಗೂ ಪಿಡಿಓ ರವರು ಪರವಾನಿಗೆಯನ್ನು ನೀಡದೇ ಇದ್ದಾಗ ಮುಂಗಾರು ಬೆಳೆಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಯು ನಿಗಧಿಪಡಿಸಿರುವ ಶುಲ್ಕ ರೂ.2000/-ಗಳನ್ನು ಪಾವತಿಸಿದ ಪರವಾನಿಗೆ ನೀಡುವ ಪುಸ್ತಕದಲ್ಲಿ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಎಂದು ನಮೂದಿಸಿರುವುದರಿಂದ ನಾನು ಸಹಿ ಮಾಡಿ ಕಾರ್ಯದರ್ಶಿ ಹಾಗೂ ಪಿ.ಡಿ.ಓ ರವರಿಗೆ ವಿಷಯ ತಿಳಿಸಿರುತ್ತೇನೆ. ದಿನಾಂಕ:11-08-2016 ರ ಅರ್ಜಿಯನ್ನು ತನಿಖೆಯ ಸಂದರ್ಭದಲ್ಲಿ ಪಿ.ಡಿ.ಓ ರವರು ತನಿಖಾಧಿಕಾರಿಯವರಿಗೆ ನೀಡಿರುವುದಿಲ್ಲ. ಇದರಲ್ಲಿ ನನ್ನ ದುರುದ್ದೇಶವೇನೂ ಇರುವುದಿಲ್ಲ. ಈ ವಿಷಯದ ಬಗ್ಗೆ ಪುನಃ ತನಿಖಾಧಿಕಾರಿಗಳನ್ನು ನೇಮಿಸಿ ಪರಿಶೀಲಿಸಬೇಕೆಂದು ಕೋರಿರುತ್ತಾರೆ".

ಮೇಲೆ ಓದಲಾದ ಕ್ರಮಾಂಕ (4)ರನ್ವಯ ಶ್ರೀ ರಾಮಚಂದ್ರ.ಜೆ, ಅಧ್ಯಕ್ಷರು, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆಗೆ ಕರೆಯಲಾಗಿ ದಿನಾಂಕ:07-12-2018 ರಂದು ಜರುಗಿದ ವಿಚಾರಣೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ ಚಿಕ್ಕಮಗಳೂರು ಹಾಗೂ ಆಪಾದಿತ ಅಧ್ಯಕ್ಷರು ಹಾಜರಾಗಿರುತ್ತಾರೆ.

ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲೆಗಳನ್ನು ಹಾಗೂ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ಮತ್ತು 48(4) ರನ್ವಯ ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವ ರದ್ದುಪಡಿಸಲು ಸರ್ಕಾರವು ನಿರ್ಣಯಿಸಿ ಮುಂದಿನಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 239 ಗ್ರಾಪಂಅ 2018 ಬೆಂಗಳೂರು, ದಿನಾಂಕ:23-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ರಾಮಚಂದ್ರ.ಜೆ, ಅಧ್ಯಕ್ಷರು, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ರವರ ಪ್ರಕರಣದಲ್ಲಿ ಆಪಾದನೆ ಸಾಬೀತಾಗಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ಮತ್ತು 48(4)ರನ್ವಯ ಚಿಕ್ಕಮಗಳೂರು ಜಿಲ್ಲೆ, ತರೀಕೆರೆ ತಾಲ್ಲೂಕು, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವವನ್ನು ರದ್ದುಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
23/3/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು, ಚಿಕ್ಕಮಗಳೂರು ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ತರೀಕೆರೆ, ಚಿಕ್ಕಮಗಳೂರು ಜಿಲ್ಲೆ.
4) ಶ್ರೀ ರಾಮಚಂದ್ರ.ಜೆ, ಅಧ್ಯಕ್ಷರು, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಂ.ಸಿ.ಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
6) ಗಣಕ ಕೋಶ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2) ಸರ್ಕಾರದ ಮಾನ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.